ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಬೆಂಗಳೂರು ನಗರ ಜಿಲ್ಲೆಯ ಮಾದನಾಯಕನಹಳ್ಳಿ ಗ್ರಾಮದ ಬಳಿ ಇರುವ ರಸ್ತೆ ಸುಧಾರಣೆ ಕುರಿತು

ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು) -

1094 (1153) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೆಂಗಳೂರು ನಗರದ ತುಮಕೂರು ರಸ್ತೆ ಮಾದನಾಯಕನಹಳ್ಳಿ ಗ್ರಾಮದಿಂದ ಕುದುರೆಗೆರೆ ಸಾಸವೆಘಟ್ಟ, ಕುಂಬಾರಹಳ್ಳಿ ಮುಖಾಂತರ ಹಾದು ಹೋಗಿ ಹೆಸರಘಟ್ಟ ಸಂಪರ್ಕ ಕಲ್ಪಿಸುವ ರಸ್ತೆಯು ಮತ್ತು ಬೆಂಗಳೂರು ನಗರದ ಕಡಬರೆಗೆ ಗ್ರಾಮದಿಂದ ಲಕ್ಷ್ಮೀಪುರ, ಬಿನ್ನಮಂಗಲ, ವಡ್ಡರಹಳ್ಳಿ ಮುಖಾಂತರ ಹಾದು ಹೋಗಿ ಮಾದನಾಯಕನಹಳ್ಳಿ-ತುಮಕೂರು ರಸ್ತೆಗೆ ಸಂಪರ್ಕ ಕಲ್ಪಿಸುವ ರಸ್ತೆಯು ಹಾಳಾಗಿ ಸಾರ್ವಜನಿಕ ವಾಹನ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ರಸ್ತೆಗಳಲ್ಲಿ ಲೋಕೋಪ ಯೋಗಿ ಇಲಾಖೆ ವತಿಯಿಂದ ಕಳೆದ ಹತ್ತು ವರ್ಷಗಳಲ್ಲಿ ಡಾಂಬರೀಕರಣದ /ಕಾಂಕ್ರೀಟ್‌ಕರಣ ಮಾಡಿದ ಕಾಮಗಾರಿಗಳಾವುವು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ರಸ್ತೆಗಳನ್ನು ಸುಸ್ಥಿತಿಗೆ ತರಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)